ಕರ್ನಾಟಕ ವಿಧಾನ ಸಭೆ ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಇಲಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE:

# ಸ್ತ್ರೀಶಕ್ತಿ ಸಂಘದ ಉತ್ಪಾದನೆಗೆ ಮಾರುಕಟ್ಟೆ ಶಿಫಾರಸು

ವಿಧಾನ ಪರಿಷತ್ತು

ಸ್ತ್ರೀ ಶಕ್ತಿ ಯೋಜನೆ ಬಲಪಡಿಸಲು ಸ್ತ್ರೀಶಕ್ತಿ ಸಂಘಗಳು ಉತ್ಪಾದಿಸುವ ಉತ್ಪನ್ನಗಳ ಮಾರಾಟಕ್ಕೆ ಬಸ್ ನಿಲ್ದಾಣ, ರೈಲ್ವೆ ನಿಲ್ದಾಣಗಳಲ್ಲಿ ಅವಕಾಶ ಮಾಡಿಕೊಡಬೇಕು ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿ ಸರ್ಕಾರಕ್ಕೆ ಶಿಫಾರಸು ಮಾಡಿದೆ.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗ ವಿಕಲಚೇತನರು ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಡಿ ಮಹಿಳೆಯರು ಮತ್ತು ಮಕ್ಕಳು ಹಾಗೂ ವಿಕಲಚೇತನರಿಗಾಗಿ ಹಮ್ಮಿಕೊಂಡಿರುವ ವಿವಿಧ ಯೋಜನೆಗಳಿಗೆ ಸಂಬಂಧಿಸಿದಂತೆ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಹಾಗೂ ಕಾರ್ಮಿಕ ಇಲಾಖೆಯಲ್ಲಿ ಮಹಿಳೆಯರು ಮತ್ತು ಮಕ್ಕಳಿಗಾಗಿ ಹಮ್ಮಿಕೊಂಡಿರುವ ಕಲ್ಯಾಣ ಕಾರ್ಯಕ್ರಮಗಳ ಕುರಿತಾದ ವರದಿಯನ್ನು ಸಮಿತಿ ಮೇಲ್ಮನೆಯಲ್ಲಿ ಮಂಡನೆ ಮಾಡಿದ್ದು, ಸ್ತ್ರೀಶಕ್ತಿ ಸಂಘದವರಿಗೆ ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ ಮೂಲಕ ಶೂನ್ಯ ಬಡ್ಡಿದರದಲ್ಲಿ ಸಾಲ ನೀಡಬೇಕು. ಸ್ತ್ರೀಶಕ್ತಿ ಸಂಘಗಳು ಉತ್ಪಾದಿಸುವ ಉತ್ಪನ್ನಗಳನ್ನು ಆನ್‌ಲೈನ್ ಮುಖಾಂತರ ಮಾರಾಟಕ್ಕೆ ವ್ಯವಸ್ಥೆ ಕಲ್ಪಿಸಬೇಕು.

ಸ್ತ್ರೀಶಕ್ತಿ ಸಂಘಗಳು ಉತ್ಪಾದಿಸುವ ಉತ್ಪನ್ನಗಳಿಗೆ ಬೇರೆ ಸಂಸ್ಥೆಯವರ ಹೆಸರನ್ನು ನಮೂದು ಮಾಡಲಾಗುತ್ತಿದೆ. ಸ್ತ್ರೀಶಕ್ತಿ ಸಂಘಗಳಿಂದ ಖರೀದಿ ಮಾಡಿದ ಉತ್ಪನ್ನಗಳ ಮೇಲೆ ಸಂಘದ ಹೆಸರು ನಮೂದಾಗಿರುವಂತೆ ನೋಡಿಕೊಳ್ಳಬೇಕು. ಸ್ತ್ರೀಶಕ್ತಿ ಸಂಘಗಳ ಸದಸ್ಯರಿಗೆ ಗುರುತಿನ ಚೀಟಿ ನೀಡಬೇಕು ಎಂದು ಶಿಫಾರಸು ಮಾಡಿದೆ.

ಹೆಣ್ಣು ಮಕ್ಕಳಿಗೆ ಕೌಶಲ್ಯ ತರಬೇತಿ ನೀಡಿ, ಅವರಿಗೆ ಉದ್ಯೋಗ ಕಲ್ಪಿಸಿಕೊಡುವುದು ಮಾತ್ರವಲ್ಲದೆ, ಸ್ವಂತ ಉದ್ಯೋಗ ಸೃಷ್ಟಿಸಿಕೊಳ್ಳುವ ಬಗ್ಗೆಯೂ ಆದ್ಯತೆ ನೀಡಬೇಕು. ಇದರ ಜೊತೆಗೆ ಸ್ತ್ರೀಶಕ್ತಿ ಸಂಘಗಳು ಬೆಳೆಯುವಂತಾಗಲು ಸರ್ಕಾರ ಸೂಕ್ತ ಕ್ರಮ ತೆಗೆದುಕೊಳ್ಳಬೇಕು ಎಂದು ಹೇಳಿದೆ.

ದೇವದಾಸಿ ಪದ್ಧತಿ ಸಂಪೂರ್ಣ ನಿರ್ಮೂಲನೆಗೆ ಕ್ರಮ ಕೈಗೊಳ್ಳಬೇಕು. ಕರ್ನಾಟಕ ಹಣಕಾಸು ಸಂಸ್ಥೆ ಮೂಲಕ ಕೈಗಾರಿಕೆ ಸ್ಥಾಪನೆ ಮಾಡುವ ಮಹಿಳೆಯರಿಗೆ 2 ಕೋಟಿ ರೂ.ಗಳನ್ನು 10 ಕೋಟಿಗೆ ಹೆಚ್ಚಳ ಮಾಡಿ ಕಡಿಮೆ ಬಡ್ಡಿ ದರದಲ್ಲಿ ಸಾಲ ನೀಡಬೇಕು. ಬೀದಿಬದಿ ವ್ಯಾಪಾರ ಮಾಡುತ್ತಿರುವ ಮಹಿಳೆಯರಿಗೆ ನೀಡುತ್ತಿರುವ ಪ್ರೋತ್ಸಾಹಧನವನ್ನು 5ರಿಂದ 10 ಸಾವಿರ ರೂ.ಗೆ ಹೆಚ್ಚಳ ಮಾಡಬೇಕು. ಲೈಂಗಿಕ ಕಿರುಕುಳಕ್ಕೆ ಸಂಬಂಧಿಸಿದಂತೆ ವಿಶೇಷ ಅಧಿಕಾರಿಗಳನ್ನು ನಿಯೋಜನೆ ಮಾಡಿ ತ್ವರಿತವಾಗಿ ಪ್ರಕರಣಗಳನ್ನು ಇತ್ಯರ್ಥ ಮಾಡಬೇಕು. ಹಿರಿಯ ನಾಗರಿಕರಿಗಾಗಿ ಹಗಲು ಯೋಗಕ್ಷೇಮ ಕೇಂದ್ರಗಳನ್ನು ಆರಂಭಿಸಬೇಕು. ವೃದ್ಧಾಶ್ರಮಗಳಿಗೆ ನೀಡಲಾಗುತ್ತಿರುವ ಅನುದಾನವನ್ನು 8ರಿಂದ 10 ಲಕ್ಷಕ್ಕೆ ಹೆಚ್ಚಳ ಸೇರಿದಂತೆ 26 ಶಿಫಾರಸುಗಳನ್ನು ಸಮಿತಿ ಮಾಡಿದೆ.